ಕರ್ನಾಟಕಸರ್ಕಾರ

ಸಂಖ್ಯೆ: ಸಿಆಸುಇ 123 ಡಿಬಿಎಂ2020(ಭಾಗ)

ಕರ್ನಾಟಕಸರ್ಕಾರದಸಚಿವಾಲಯ
ವಿಧಾನಸೌಧ,
ಬೆಂಗಳೂರು, ದಿನಾಂಕ: 18.04.2020.

## ಸುತ್ತೋಲೆ

1. ಕರ್ನಾಟಕ ರಾಜ್ಯದಲ್ಲಿ ಕೊರೊನಾವೈರಸ್ (ಕೋವಿಡ್-19) ಸಾಂಕ್ರಾಮಿಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ಸಚಿವಾಲಯ ಸೇರಿದಂತೆ ರಾಜ್ಯಮಟ್ಟದ ಕಛೇರಿಗಳಲ್ಲಿ ಹಾಗೂ ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಅತ್ಯಗತ್ಯ ಸೇವೆಗಳನ್ನು ಒದಗಿಸುತ್ತಿರುವ ಇಲಾಖೆಗಳಾದ (1) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ; (2) ವೈದ್ಯಕೀಯ ಶಿಕ್ಷಣ ಇಲಾಖೆ; (3) ಒಳಾಡಳಿತ ಇಲಾಖೆ; (4) ಕಂದಾಯ ಇಲಾಖೆ; (5) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ; (6) ನಗರಾಭಿವೃದ್ಧಿ ಇಲಾಖೆ; (7) ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ; (8) ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ; (9) ಸಾರಿಗೆ ಇಲಾಖೆ; (10) ಇಂಧನ ಇಲಾಖೆ; (11) ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಇ-ಆಡಳಿತ); (12) ರಾಜ್ಯದಲ್ಲಿರುವ ಎಲ್ಲಾ ಖಜಾನೆಗಳನ್ನು ಸೇರಿದಂತೆ ಆರ್ಥಿಕ ಇಲಾಖೆ; (13) ಪಶುಸಂಗೋಪನೆ ಮತ್ತು ಮೀನುಗಾರಿಕೆಇಲಾಖೆ; (14) ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ, ಇಲಾಖೆ; (15) ಕೃಷಿ ಉತ್ಪನ್ನ ಮಾರುಕಟ್ಟೆ; (16) ಕೃಷಿ ಇಲಾಖೆ; (17) ಕಾರ್ಮಿಕ ಇಲಾಖೆ; ಹಾಗೂ (18) ತೋಟಗಾರಿಕೆ ಇಲಾಖೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ವರ್ಗದ ಅಧಿಕಾರಿ/ಸಿಬ್ಬಂದಿಗಳು ಕರ್ತವ್ಯಕ್ಕೆ ಹಾಜರಾಗತಕ್ಕದ್ದು.

2. ಮೇಲ್ಕಾಣಿಸಿದ ಇಲಾಖೆಗಳನ್ನು ಹೊರತುಪಡಿಸಿ, ಉಳಿದ ಇಲಾಖೆಗಳಲ್ಲಿ, ಸರ್ಕಾರಿ ನಿಗಮ/ ಮಂಡಳಿ/ಪ್ರಾಧಿಕಾರಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರೂಪ್-ಎ ಮತ್ತು ಗ್ರೂಪ್-ಬಿ ವೃಂದಗಳ ಎಲ್ಲಾ ಅಧಿಕಾರಿಗಳು ಮತ್ತು ಗ್ರೂಪ್-ಸಿ ಮತ್ತು ಗ್ರೂಪ್-ಡಿ ವೃಂದಗಳ ಶೇಕಡಾ 33 ರಷ್ಟು ಸಿಬ್ಬಂದಿಗಳು ಕರ್ತವ್ಯಕ್ಕೆ ಹಾಜರಾಗುವಂತೆ ನಿರ್ದೇಶಿಸಲಾಗಿದೆ.

3. ಈ ಸುತ್ತೋಲೆಯು ದಿನಾಂಕ:20.04.2020 ರಿಂದ ದಿನಾಂಕ:03.05.2020ರವರೆಗೆ ಜಾರಿಯಲ್ಲಿರುತ್ತದೆ.

ಟಿ.ಎಂ.ವಿಜಯಭಾಸ್ಕರ್
(ಟಿ.ಎಂ. ವಿಜಯ ಭಾಸ್ಕರ್)
ಮುಖ್ಯಕಾರ್ಯದರ್ಶಿ
ಕರ್ನಾಟಕಸರ್ಕಾರ

**ಇವರಿಗೆ:-**

1. ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿರವರುಗಳಿಗೆ.
2. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ
3. ಎಲ್ಲಾ ಜಿಲ್ಲಾಧಿಕಾರಿರವರುಗಳಿಗೆ.
4. ಶಾಖಾ ರಕ್ಷಾಕಡತ / ಹೆಚ್ಚುವರಿಪ್ರತಿ